ಇ) ಇಲ್ಲಾ

ಈ) ಉದ್ಭವಿಸುವುದಿಲ್ಲ.

426(1133) : ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶೃಂಗೇರಿಯಲ್ಲಿರುವ ಪದವಿ ಪೂರ್ವ ವಿದ್ಯಾರ್ಥಿನಿ ನಿಲಯದಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ನಕ್ಸಲ್ ಪೀಡಿತ ಪ್ರದೇಶದ ಗಿರಿಜನ ವಿದ್ಯಾರ್ಥಿನಿಯರಿಗೆ ಪ್ರವೇಶಾವಕಾಶ ಕಲ್ಪಿಸಲು ನಿಗದಿತ ಸಂಖ್ಯೆಗಿಂತ ಈ ಸಾಲಿನಲ್ಲಿ ಹೆಚ್ಚಿನ ವಿದ್ಯಾರ್ಥಿನಿಯರನ್ನು ವಸತಿ ನಿಲಯಕ್ಕೆ ಸೇರಿಸಿಕೊಳ್ಳಲಾಗಿದೆಯೇ, ಹಾಗಿದ್ದಲ್ಲಿ ಹೆಚ್ಚುವರಿ ಅನುದಾನವನ್ನು ಒದಗಿಸಲಾಗುವುದೇ. ಯಾವಾಗ ಒದಗಿಸಲಾಗುವುದು;

ಇ) ಹೆಚ್ಚಿನ ಗಿರಿಜನ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲು ಹಾಗೂ ವಿದ್ಯಾರ್ಥಿ ನಿಲಯದ ಸಂಖ್ಯಾ ವಿದ್ಯಾರ್ಥಿ ನಿಲಯದ ಸಂಖ್ಯಾ ಬಲವನ್ನು ಹೆಚ್ಚಿಸುವ ಪ್ರಸ್ತಾವನೆಯನ್ನು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯು ಸರ್ಕಾರಕ್ಕೆ ಕಳುಹಿಸಿದೆಯೆ;

ಈ) ಕಳುಹಿಸಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಶೃಂಗೇರಿಯಲ್ಲಿ 50 ಸಂಖ್ಯಾಬಲದ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಒಂದು ವಿದ್ಯಾರ್ಥಿನಿಲಯವಿದೆ ಶೃಂಗೇರಿಯಲ್ಲಿ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿನಿಲಯವಿರುವುದಿಲ್ಲ.

ಆ) ಶೃಂಗೇರಿಯಲ್ಲಿ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿನಿಲಯ ಇಲ್ಲದಿರುವುದರಿಂದ ಈ ಪ್ರಶ್ನೆಗೆ ಉತ್ತರ ಉದ್ಭವಿಸುವುದಿಲ್ಲ.

ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲು ಮತ್ತು ಸಂಖ್ಯಾಬಲವನ್ನು ಹೆಚ್ಚಿಸಲು ಪ್ರಸ್ತಾವನೆ ಬಂದಿದೆ.

ಈ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

427(1132) : ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) : ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪ ಶೃಂಗೇರಿ ಹಾಗೂ ನರಸಿಂಹರಾಜಪುರ ತಾಲ್ಲೂಕುಗಳಲ್ಲಿರುವ ಪಶು ಆಸ್ಪತ್ರೆ ವೈದ್ಯರ ಹಾಗೂ ಇತರೆ ಸಿಬ್ಬಂದಿಗಳ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಭರ್ತಿ ಮಾಡಲಾಗುವುದು.

ಶ್ರೀ ಮಿರಾಜುದ್ದೀನ್ ಎನ್. ಪಟೇಲ್(ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು)

ಅ) ಬಂದಿದೆ.

ಆ) 1. 250 ಪಶುವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

2. ಗುತ್ತಿಗೆ ಆಧಾರ ಮೇರೆಗೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 192 ಪಶುವೈದ್ಯಾಧಿಕಾರಿಗಳ ಸೇವೆಯನ್ನು ಖಾಯಂಗೊಳಿಸುವ ವಿಷಯ ಸರ್ಕಾರದ ಮಟ್ಟದ ಪರಿಶೀಲನೆಯಲ್ಲಿದೆ.

3. ಪಶುವೈದ್ಯಕೀಯ ಮೇಲ್ವಿಚಾರಕರ ಮತ್ತು ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳಿಂದ ಅನುಕ್ರಮವಾಗಿ ಮುಂಬಡ್ತಿ ಮೂಲಕ ಹಾಗೂ ಪಶುವೈದ್ಯಕೀಯ ಪರೀಕ್ಷಕರ ಖಾಲಿ ಹುದ್ದೆಗಳನ್ನು ಪಶುವೈದ್ಯಕೀಯ ಸಹಾಯಕರ ವೃಂದದಿಂದ ಮುಂಬಡ್ತಿ ಮೂಲಕ ತುಂಬಲು ಸರ್ಕಾರದ ಪರಿಶೀಲನೆಯಲ್ಲಿದೆ. ಖಾಲಿ ಡಿ ದರ್ಜೆ ಹುದ್ದೆಗಳನ್ನು ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಅನುಕಂಪದ ಆಧಾರದ ಮೇಲೆ ಹಾಗೂ ಇತರೆ ಇಲಾಖೆಗಳಿಂದ ಮರು ವಿನ್ಯಾಸದ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತದೆ.

428(116) : ಶ್ರೀ ಕಟ್ಟಾ ಸುಬ್ರಮಣ್ಯನಾಯ್ಡು(ಶಿವಾಜಿನಗರ) : ಮಾನ್ಯ ಸಣ್ಣ ಕೈಗಾರಿಕಾ ಮತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ಸಾಬೂನು ಮತ್ತು ಮಾರ್ಜಕ ಸಂಸ್ಥೆಯಲ್ಲಿ 1990ರಲ್ಲಿ ನಡೆದಿರುವ ಅವ್ಯವಹಾರಗಳಾವುವು;

ಆ) ಈ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ತನಿಖೆ ನಡೆಸಲಾಗಿದೆಯೇ(ತನಿಖಾವರದಿಯ ಪ್ರತಿ ನೀಡುವುದು);

ಇ) ಅವ್ಯವಹಾರಗಳಿಗೆ ಸಂಬಂಧಪಟ್ಟಂತೆ ಎಷ್ಟು ಜನರ ಮೇಲೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

ಈ) ಈಗ ಮತ್ತೆ ಹೊಸದಾಗಿ ತನಿಖೆ ನಡೆಸಲು ಸರ್ಕಾರ ನಿರ್ಧರಿಸಿದೆಯೇ;

ಉ) ಹಾಗಿದ್ದಲ್ಲಿ ಅದಕ್ಕೆ ಕಾರಣವೇನು;

ಊ) ಹಿಂದಿನ ತನಿಖಾ ವರದಿಯನ್ನು ಸರ್ಕಾರ ತಿರಸ್ಕರಿಸಲು ಉದ್ದೇಶಿಸಿದೆಯೇ;

ಋ) ಹಾಗಿದ್ದಲ್ಲಿ, ಅದಕ್ಕೆ ಕಾರಣವೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಭಾರಿ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕಾ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು)

ಅ) ದಿನಾಂಕ: 1-4-199 ರಿಂದ 31-7-1992ರ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಿಯವರ ಅನುಮೋದನೆ ಪಡೆಯದೆ ಖರೀದಿ ಆದೇಶ ನೀಡಿರುವುದಕ್ಕೆ ಸಂಬಂಧಿಸಿರುತ್ತದೆ.

ಆ) ಹೌದು.

ಇ) ಕಂಪನಿಯಲ್ಲಿ ಇಲಾಖಾ ವಿಚಾರಣೆ ನಡೆಸಿದಾಗ 4 ಜನ ಅಧಿಕಾರಿಗಳು ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೆ ಕಛೇರಿ ಆದೇಶ ನೀಡಿರುವುದು ರುಜುವಾತಾಗಿರುತ್ತದೆ. ಈ ಮೊತ್ತವನ್ನು ಮೂರು ಜನರಿಂದ ವಸೂಲಾತಿ ಮಾಡಲಾಗಿದೆ. ನಾಲ್ಕನೇ ಅಧಿಕಾರಿಯಾದ ಶ್ರೀ ಬಿ.ಟಿ. ಜನಾರ್ಧನ್ ಅವರಿಂದ ರೂ 19,73,901-00 ವಸೂಲಿಗಾಗಿ ಬಾಕಿ ವಸೂಲಿಯಾಗಿರುವುದಿಲ್ಲ.

ಈ) ಇಲ್ಲ.

ಉ) ಇಲ್ಲ

ಊ) ಇಲ್ಲ

ಋ) ಉದ್ಭವಿಸುವುದಿಲ್ಲ.